# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 233 (261)
2. ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 09.12.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿ ಪೂರ್ಣಗೊಂಡಿದೆಯೇ; ಪೂರ್ಣಗೊಳ್ಳದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು; | ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿಯು ಪೂರ್ಣಗೊಂಡಿದ್ದು, ವಿಮಾನ ನಿಲ್ದಾಣದಲ್ಲಿ ಅಳವಡಿಸಿರುವ ಯಂತ್ರೋಪಕರಣಗಳ ಅಂತಿಮ ಪರೀಕ್ಷೆ ನಡೆಸಲಾಗುತ್ತಿದೆ. |
| (ಆ) | ವಿಜಯಪುರ ವಿಮಾನ ನಿಲ್ದಾಣಕ್ಕೆ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಮತ್ತು ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ವಿಜಯಪುರ ವಿಮಾನ ನಿಲ್ದಾಣದ ಅಭಿವೃದ್ಧಿಗೆ ರಾಜ್ಯ ಸರ್ಕಾರದಿಂದ ರೂ.347.92 ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| (ಇ) | ವಿಜಯಪುರ ವಿಮಾನ ನಿಲ್ದಾಣ ಪೂರ್ಣಗೊಂಡಿದ್ದಲ್ಲಿ ಉದ್ಘಾಟನೆ ದಿನಾಂಕ ನಿಗದಿ ಮಾಡಲಾಗಿದೆಯೇ; | ವಿಜಯಪುರ ವಿಮಾನ ನಿಲ್ದಾಣ ಕಾರ್ಯಾಚರಣೆಗೆ ಅವಶ್ಯವಿರುವ ಮಾನವ ಸಂಪನ್ಮೂಲ, ವಾಹನ, ಉಪಕರಣಗಳನ್ನು ಒದಗಿಸಲಾಗಿದೆ. ವಿಮಾನ ನಿಲ್ದಾಣದ ಕಾರ್ಯಾಚರಣೆಗೆ ಪರವಾನಗಿಯನ್ನು ಕೇಂದ್ರ ಸರ್ಕಾರದಿಂದ ಪಡೆಯಲು ಕ್ರಮವಹಿಸಿದೆ. ನಂತರ ಉದ್ಘಾಟನೆಯ ದಿನಾಂಕವನ್ನು ನಿರ್ಧರಿಸಲಾಗುವುದು. |
| (ಈ) | ವಿಜಯಪುರ ವಿಮಾನ ನಿಲ್ದಾಣಕ್ಕೆ ತಗಲಿರುವ ವೆಚ್ಚವೆಷ್ಟು; ಕಾಮಗಾರಿಯು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಪ್ರಸ್ತುತ ವಿಮಾನ ನಿಲ್ದಾಣದ ಅಭಿವೃದ್ಧಿಗೆ ರೂ.347.92 ಕೋಟಿ ವೆಚ್ಚವಾಗಿರುತ್ತದೆ. ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಮುಕ್ತಾಯಗೊಂಡಿವೆ. |

ಸಂಖ್ಯೆ:ಮೂಅಇ 245 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು